4. ಬೊಸ್ಲಾದಲ್ಲಿ ಪ್ರಮಂದಿರ	1
5. ರಾಜೇಶ್ವರ ಹಳ್ಳಿ	1
6. ಮುಡ್ಡಿಯಲ್ಲಿ	1
7. ಹಲ್ಲೂರ್‌ಬಲ್ಲಿ	1

ಆ) ಬಸವಕಲ್ಯಾಣ ಮತ್ತು ಸಸ್ತಾಪುರ ಅತಿಥಿಗೃಹಗಳ ಅಭಿವೃದ್ಧಿಗಾಗಿ ತಲಾ 1.50 ಲಕ್ಷ ರೂ.ಗಳು ಮಂಜೂರಾಗಿದ್ದು, 199-93ರ ಸಾಲಿನಲ್ಲಿ ಕೈಗೊಳ್ಳಲಾಗುವುದು.

ತಿಪ್ರಾಂಥ ಅತಿಥಿಗೃಹದ ಅಭಿವೃದ್ಧಿಗೊಳಿಸಲು ಸಹ ಕ್ರಮ ಕೈಗೊಳ್ಳಲಾಗುವುದು.

ಜಿಲ್ಲಾಪರಿಷತ್ ಮತ್ತು ಮಂಡಲ ಪಂಚಾಯತ್‌ಗಳ ಚುನಾವಣೆ

798 - ಶ್ರೀ ಬಸವರಾಜ್ ಪಾಟೀಲ್ ಅಟ್ಟೂರ್ (ಬಸವಕಲ್ಯಾಣ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಜಿಲ್ಲಾ ಪರಿಷತ್ ಮತ್ತು ಮಂಡಲ ಪಂಚಾಯತ್‌ಗಳಿಗೆ ಚುನಾವಣೆ ನಡೆಸಲು ಸರ್ಕಾರವು ನಿರ್ಧಾರವನ್ನು ತೆಗೆದುಕೊಂಡಿದೆಯೇ?

ಆ) ಹಾಗಿದ್ದಲ್ಲಿ ಈ ಚುನಾವಣೆಗಳನ್ನು ಯಾವಾಗ ನಡೆಸಲಾಗುವುದು?

ಇ) ಜಿಲ್ಲಾ ಪರಿಷತ್ ಮತ್ತು ಮಂಡಲ ಪಂಚಾಯತ್ ಕಾಯ್ದೆಗೆ ತಿದ್ದುಪಡಿ ತಂದನಂತರ ಚುನಾವಣೆಯನ್ನು ನಡೆಸುವ ಪ್ರಸ್ತಾವನೆಯಿದೆಯೇ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) ಈ ವಿಷಯವು ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ.

ಆ) ಎಷ್ಟು ಬೇಗ ಸಾಧ್ಯವೋ ಅಷ್ಟು ಬೇಗ.

ಇ) ಹೌದು.

ಬಸವಕಲ್ಯಾಣ ತಾಲ್ಲೂಕಿನ ಗ್ರಾಮಗಳಿಗೆ ಕುಡಿಯುವ ನೀರಿನ ವ್ಯವಸ್ಥೆ

799 - ಶ್ರೀ ಬಸವರಾಜ ಪಾಟೀಲ್ ಅಟ್ಟೂರು (ಬಸವಕಲ್ಯಾಣ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣ ತಾಲ್ಲೂಕಿನ ಸಸ್ತಾಪುರ,ಮಂಡಾಲ, ಗುಂದೂರು, ಗುಂಡೂರುವಾಡಿ, ಹಾರ್ಕೂಡ್, ಅಲ್ಲೂಡ್ ಹೊನ್ನಲ್ಲಿ ರಾಮತೀರ್ಥ(ಕೆ) ಗೋಟಾಲ ಗ್ರಾಮಗಳಲ್ಲಿ ನಳ ಯೋಜನೆ ಇದ್ದರೂ ಸಹ ನೀರಿನ ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದರೆ ಕುಡಿಯುವ ನೀರಿನ ಯೋಜನೆಯಡಿಯಲ್ಲಿ ಯಾವ ಕ್ರಮ ಕೈಗೊಂಡಿರುವಿರಿ? ಇಲ್ಲದಿದ್ದರೆ ಕಾರಣವೇನು?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತುಪಂಚಾಯತ್ ರಾಜ್ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.